# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 569

ಸದಸ್ಯರ ಹೆಸರು : ಶ್ರೀ ಸಿ.ಆರ್.ಮನೋಹರ್.
(ಸ್ಥಳೀಯ ಸಂಸ್ಥೆಗಳ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 16.09.2021

ಉತ್ತರಿಸುವ ಸಚಿವರು : ಮಾನ್ಯ ಜಲ ಸಂಪನ್ಮೂಲ ಸಚಿವರು

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
| --- | --- | --- |
| ಅ) | 2019-2020ನೇ ಸಾಲಿನಲ್ಲಿ ಮುಳಬಾಗಿಲು ತಾಲ್ಲೂಕು ಕಾಯಲೂರು ಮುಖ್ಯ ರಸ್ತೆಯಿಂದ ತೋರಡಿ ಎಸ್.ಸಿ. ಗ್ರಾಮದವರೆಗೆ ಸಿ.ಸಿ.ರಸ್ತೆ ನಿರ್ಮಾಣ ಕಾಮಗಾರಿಗೆ ಎಸ್.ಸಿ.ಪಿ/ಟಿ.ಎಸ್.ಪಿ. ಯೋಜನೆಯಡಿ ಅನುದಾನ ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವಿಶ್ವೇಶ್ವರಯ್ಯ ಜಲ ನಿಗಮದಡಿಯಲ್ಲಿ 2019-20ನೇ ಸಾಲಿನ ಎಸ್.ಸಿ.ಪಿ ಯೋಜನೆಯಡಿಯಲ್ಲಿ ಕೋಲಾರಜಿಲ್ಲೆ, ಮುಳಬಾಗಿಲು ತಾಲ್ಲೂಕು, ತಾಯಲೂರು ಮುಖ್ಯ ರಸ್ತೆಯಿಂದ ತೋರಡಿ ಎಸ್.ಸಿ ಗ್ರಾಮದವರೆಗೂ ಸಿ.ಸಿ ರಸ್ತೆ ಕಾಮಗಾರಿಯನ್ನು ರೂ.100.00 ಲಕ್ಷಗಳ ಅನುದಾನದೊಂದಿಗೆ ಕೆಲವು ಷರತ್ತಿಗೊಳಪಟ್ಟು ಪತ್ರ ಸಂಖ್ಯೆ: 3363/2019-20 ದಿನಾಂಕ: 19-02-2020 ರಲ್ಲಿ ಕೆ.ಆರ್.ಐ.ಡಿ.ಎಲ್, ಸಂಸ್ಥೆಗೆ ವಹಿಸಲಾಗಿರುತ್ತದೆ. |
| ಆ) | ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಕೆ.ಆರ್.ಐ.ಡಿ.ಎಲ್. ಮೂಲಕ ಅನುಷ್ಠಾನಗೊಳಿಸಲು ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿರುವುದು ನಿಜವೇ; | ಸದರಿ ಕಾಮಗಾರಿಯ ಅಂದಾಜು ಪಟ್ಟಿಗೆ ಎತ್ತಿನಹೊಳೆ ಯೋಜನಾ ವಲಯ ಕಛೇರಿ ಪತ್ರ ಸಂಖ್ಯೆ: 3303/2019-20 ದಿನಾಂಕ:23-03-2020ರಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. |
| ಇ) | ಹಾಗಿದ್ದಲ್ಲಿ, 2019-2020ನೇ ಸಾಲಿನಲ್ಲಿ ಕಾಮಗಾರಿಗೆ ಅನುಮೋದನೆ ನೀಡಿ ಅನುದಾನ ಮಂಜೂರಾಗಿದ್ದರೂ ಸಹ ಇದುವರೆವಿಗೂ ಕಾಮಗಾರಿಯನ್ನು ಕೈಗೆತ್ತಿಕೊಳ್ಳದಿರಲು ಕಾರಣಗಳೇನು; | ದಿನಾಂಕ:12-03-2020 ರ ನಂತರದಲ್ಲಿ ಕಾಮಗಾರಿಗಳನ್ನು ಕೆ.ಆರ್.ಐ.ಡಿ.ಎಲ್ ಮುಖಾಂತರ ಅನುಷ್ಠಾನಗೊಳಿಸಲು ಮಾನ್ಯ ಉಚ್ಚ ನ್ಯಾಯಾಲಯದ ತಡೆಯಾಜ್ಞೆ ಇದ್ದುದರಿಂದ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದ ಸದರಿ ಆದೇಶದ ಮೇರೆಗ |
| ಈ) | 2019-2020ನೇ ಸಾಲಿನಲ್ಲಿ ಈ ಕಾಮಗಾರಿಗೆ ಆಡಳಿತಾತ್ಮಕ ಅನುಮೋನೆ ನೀಡಿದ್ದರೂ ಸಹ ಸರ್ಕಾರ ಇದುವರೆವಿಗೂ ಅನುದಾನವನ್ನು ಬಿಡುಗಡೆ ಮಾಡದಿರಲು ಕಾರಣಗಳೇನು; | ದಿನಾಂಕ:05-10-2020ರಂದು ನಡೆದ 15ನೇ ನಿರ್ದೇಶಕರ ಮಂಡಳಿಯಲ್ಲಿ 2019-20ನೇ ಸಾಲಿನಲ್ಲಿ ಕೆ.ಆರ್.ಐ.ಡಿ.ಎಲ್/ನಿರ್ಮಿತಿಕೇಂದ್ರ ಸಂಸ್ಥೆಗಳಿಗೆ ವಹಿಸಲಾಗಿರುವ ಅನುಮೋದಿತ ಎಸ್.ಸಿ.ಪಿ-ಟಿ.ಎಸ್.ಪಿ ಕಾಮಗಾರಿಗಳನ್ನು ಸದರಿ ಸಂಸ್ಥೆಗಳು ಇದುವರೆಗೆ ಪ್ರಾರಂಭಿಸದಿದ್ದಲ್ಲಿ, ಅಂತಹ ಕಾಮಗಾರಿಗಳನ್ನು ಆ ಸಂಸ್ಥೆಗಳಿಂದ ಹಿಂಪಡೆದು ನಿಯಮಾನುಸಾರ ಟೆಂಡರ್ |

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| | | ಮೂಲಕ ನಿಗಮದ ವತಿಯಿಂದಲೇ ಕೈಗೊಳ್ಳಲು ನಿರ್ದೇಶಿಸಲಾಗಿರುತ್ತದೆ. ಅದರಂತೆ ಸದರಿ ಕಾಮಗಾರಿಯ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದ್ದು, ಪರಿಶೀಲನೆಯಲ್ಲಿದೆ. ನಿಗಮದ ವತಿಯಿಂದ ಕೆ.ಟಿ.ಪಿ.ಪಿ ನಿಯಮಾವಳಿಗಳಂತೆ ಟೆಂಡರ್ ಮೂಲಕ ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುವುದು. |
| ಉ) | ಸರ್ಕಾರ ಪ್ರಸಕ್ತ ಸಾಲಿನಲ್ಲಾದರೂ ಅನುದಾನವನ್ನು ಬಿಡುಗಡೆ ಮಾಡಿ, ಸಿ.ಸಿ. ರಸ್ತೆ ನಿರ್ಮಾಣದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಕ್ರಮ ವಹಿಸುವುದೇ; | ಸದರಿ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿ ಕೈಗೆತ್ತಿಕೊಂಡು ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುತ್ತಿದೆ. |
| ಊ) | ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು ಮತ್ತು ಯಾವ ಕಾಲಮಿತಿಯೊಳಗಾಗಿ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು? (ವಿವರಗಳನ್ನು ನೀಡುವುದು) | |

ಜಸಂಇ 141 ಎಂಎಲ್‌ಎ 2021

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು